ಕರ್ನಾಟಕ ಸರ್ಕಾರ

ಸಂಖ್ಯೆ.ಜಅಇ/ಅ-2/ಬಿ.ವ-14/2014-15

ಆಯುಕ್ತರ ಕಛೇರಿ,
ಜಲಾನಯನ ಅಭಿವೃದ್ಧಿ ಇಲಾಖೆ,
7ನೇ ಮಹಡಿ, ಕೆ.ಹೆಚ್.ಬಿ.ಬ್ಲಾಕ್,
ಕಾವೇರಿ ಭವನ, ಕೆ.ಜಿ.ರಸ್ತೆ,
ಬೆಂಗಳೂರು-9.
ದಿನಾಂಕ : 30.10.2014

## ಕಛೇರಿ ಆದೇಶ

ವಿಷಯ: IWMP ಯೋಜನೆಯಲ್ಲಿ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರನ್ನು ಯೋಜನಾ ಅನುಷ್ಠಾನ ಸಂಸ್ಥೆಯ(PIA)ಮುಖ್ಯಸ್ಥರನ್ನಾಗಿ ನೇಮಿಸುವ ಬಗ್ಗೆ;

ಉಲ್ಲೇಖ: 1. ಸರ್ಕಾರದ ಆದೇಶ ಸಂ;ಕೃಇ/166/ಕೃಸೇಪ/2011. ಬೆಂಗಳೂರು,ದಿನಾಂಕ: 08.07.2014.
2. ದಿನಾಂಕ: 27.10.2014ರಂದು ನಡೆದ ವಿಡಿಯೋ ಸಂವಾದದಲ್ಲಿ ಚರ್ಚಿಸಿದಂತೆ.

**ಪ್ರಸ್ತಾವನೆ:**

IWMP ಯೋಜನೆಯನ್ನು ಜಲಾನಯನ ಅಭಿವೃದ್ಧಿ ಇಲಾಖೆಯಲ್ಲಿ 2009-10ನೇ ಸಾಲಿನಿಂದ ಜನರ ಸಹಭಾಗಿತ್ವದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ಸದರೀ ಯೋಜನೆಯಡಿ ರಾಜ್ಯದಲ್ಲಿ ಉಪಚಾರಕ್ಕೆ ಲಭ್ಯವಿರುವ ಎಲ್ಲಾ ಜಲಾನಯನ ಪ್ರದೇಶವನ್ನು ಪೂರ್ಣವಾಗಿ ಉಪಚರಿಸಲು ಹಂತಹಂತವಾಗಿ ಜಲಾನಯನ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದ್ದು 14 ನೇ ಪಂಚವಾರ್ಷಿಕ ಯೋಜನೆ ಅವಧಿಯೊಳಗೆ ಪೂರ್ಣವಾಗಿ ಉಪಚರಿಸಲು ರಾಜ್ಯದ ಮುನ್ನೋಟ ಯೋಜನೆ ತಯಾರಿಸಿದ್ದು ಅದರಂತೆ ಇಲಾಖೆ ಕ್ರಮವಹಿಸಿರುತ್ತದೆ. ಉಲ್ಲೇಖದ ಸರ್ಕಾರಿ ಆದೇಶದಲ್ಲಿ ಜಲಾನಯನ ಅಭಿವೃದ್ಧಿ ಇಲಾಖೆಯನ್ನು ಜಿಲ್ಲಾ ಮಟ್ಟದಲ್ಲಿ ಕೃಷಿ ಇಲಾಖೆಯೊಂದಿಗೆ ವಿಲೀನಗೊಳಿಸಲಾಗಿರುತ್ತದೆ. ಇದರಿಂದ ಉಂಟಾಗಿರುವ ಕೆಲವು ಆಡಳಿತಾತ್ಮಕ ತೊಂದರೆಗಳನ್ನು ಪರಿಹರಿಸಲು ಪರಿಷ್ಕರಿಸಿದ ಮಾರ್ಗಸೂಚಿಗಳನ್ನು ಯೋಜನೆಯ ಅನುಷ್ಠಾನಕ್ಕಾಗಿ ಜಾರಿಗೊಳಿಸಬೇಕಾಗಿದೆ. ಸಾಮಾನ್ಯ ಮಾರ್ಗಸೂಚಿಗಳನ್ವಯ ತಾಲ್ಲೂಕು ಮಟ್ಟದಲ್ಲಿ ತಾಲ್ಲೂಕು ಜಲಾನಯನ ಅಭಿವೃದ್ಧಿ ಅಧಿಕಾರಿಯನ್ನು(ಕೃಷಿ ಅಧಿಕಾರಿ) ಯೋಜನಾ ಅನುಷ್ಠಾನ ಸಂಸ್ಥೆಯ (PIA) ಮುಖ್ಯಸ್ಥರನ್ನಾಗಿ ನೇಮಿಸಲಾಗಿತ್ತು ಆದರೆ ಉಲ್ಲೇಖದ ಸರ್ಕಾರಿ ಆದೇಶದಲ್ಲಿ ಸಹಾಯಕ ಕೃಷಿ ನಿರ್ದೇಶಕರು ತಾಲ್ಲೂಕು ಮಟ್ಟದ ಅಧಿಕಾರಿಗಳಾಗಿರುವುದರಿಂದ ಇದನ್ನು ಮಾರ್ಪಡಿಸುವುದು ಅವಶ್ಯವಿರುತ್ತದೆ. ಈ ಬಗ್ಗೆ ದಿನಾಂಕ:27.10.2014ರಂದು ಜಿಲ್ಲಾ ಜಂಟಿ ಕೃಷಿ ನಿರ್ದೇಶಕರುಗಳ, ಜಿಲ್ಲಾ ಜಲಾನಯನ ಅಭಿವೃದ್ಧಿ ಅಧಿಕಾರಿಗಳ

ಹಾಗೂ ಕ್ಷೇತ್ರ ಮಟ್ಟದ ಅಧಿಕಾರಿಗಳ ವಿಡಿಯೋ ಸಂವಾದ ಕಾರ್ಯಕ್ರಮದಲ್ಲಿ ವ್ಯಾಪಕವಾಗಿ ಚರ್ಚಿಸಿ, ಇಲಾಖೆಯು ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರನ್ನು ಯೋಜನಾ ಅನುಷ್ಠಾನ ಸಂಸ್ಥೆಯ(PIA) ಮುಖ್ಯಸ್ಥರನ್ನಾಗಿ ನೇಮಿಸಲು ತೀರ್ಮಾನಿಸಿದ ಹಿನ್ನಲೆಯಲ್ಲಿ ಪರಿಷ್ಕೃತ ಆದೇಶವನ್ನು ಈ ಕೆಳಗಿನಂತೆ ಜಾರಿಗೊಳಿಸಿದೆ.

## ಆದೇಶ

ದಿನಾಂಕ: 01.11.2014ರಿಂದ ಜಾರಿಗೆ ಬರುವಂತೆ ಕೃಷಿ ಇಲಾಖೆಯ ತಾಲ್ಲೂಕು ಮಟ್ಟದ ಸಹಾಯಕ ಕೃಷಿ ನಿರ್ದೇಶಕರನ್ನು ಸಮಗ್ರ ಜಲಾನಯನ ಅಭಿವೃದ್ಧಿ ಕಾರ್ಯಕ್ರಮದ ತಾಲ್ಲೂಕು ಮಟ್ಟದ ಯೋಜನಾ ಅನುಷ್ಠಾನ ಸಂಸ್ಥೆಯ(PIA) ಮುಖ್ಯಸ್ಥರನ್ನಾಗಿ ನೇಮಿಸಿದೆ. ಸದರೀ ಅಧಿಕಾರಿಗಳು ಸಮಗ್ರ ಜಲಾನಯನ ನಿರ್ವಹಣೆ ಕಾರ್ಯಕ್ರಮದ(IWMP) ಕಾರ್ಯಚರಣೆ ಕೈಪಿಡಿಯಲ್ಲಿ ನೀಡಿರುವ ಮಾರ್ಗಸೂಚಿಗಳನ್ವಯ, ಕೇಂದ್ರ ಸರ್ಕಾರದ ಭೂಸಂಪನ್ಮೂಲ ಇಲಾಖೆಯು ಹೊರಡಿಸಿರುವ ಸಾಮಾನ್ಯ ಮಾರ್ಗಸೂಚಿಗಳನ್ವಯ ಮತ್ತು ಇಲಾಖೆ ಸುತ್ತೋಲೆಗಳನ್ವಯ ಯೋಜನೆಯ ಸಮರ್ಪಕ ಅನುಷ್ಠಾನಕ್ಕಾಗಿ ಕ್ರಮ ವಹಿಸಲು ಆದೇಶಿಸಿದೆ.

ಸಹಿ :
ಆಯುಕ್ತರು
ಜಲಾನಯನ ಅಭಿವೃದ್ಧಿ ಇಲಾಖೆ.
ಬೆಂಗಳೂರು.

ಪ್ರತಿಯನ್ನು ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಕೃಷಿ ಇಲಾಖೆ ಬಹುಮಹಡಿಗಳ ಕಟ್ಟಡ ಬೆಂಗಳೂರು ರವರಿಗೆ ಆದರ ಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ.

ಪ್ರತಿಯನ್ನು ಆಯುಕ್ತರು ,ಕೃಷಿ ಇಲಾಖೆರವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ [redacted].

ಪ್ರತಿಯನ್ನು ಎಲ್ಲಾ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರು, ಕೃಷಿ ಇಲಾಖೆ ರವರಿಗೆ ಸೂಕ್ತ ಕ್ರಮಕ್ಕಾಗಿ ರವಾನಿಸಿದೆ

ಪ್ರತಿಯನ್ನು ಎಲ್ಲಾ ಉಪ ಕೃಷಿ ನಿರ್ದೇಶಕರುಗಳು-1 ಮತ್ತು2 ಹಾಗೂ ಎಲ್ಲಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರುಗಳಿಗೆ ಸೂಕ್ತ ಕ್ರಮಕ್ಕಾಗಿ ರವಾನಿಸಿದೆ (ಜಿಲ್ಲಾ ಜಂಟಿ ಕೃಷಿ ನಿರ್ದೇಶಕರುಗಳ ಮುಖಾಂತರ)

ಪ್ರತಿಯನ್ನು ಕೇಂದ್ರ ಕಛೇರಿಯ ಘಟಕ ಮುಖ್ಯಸ್ಥರುಗಳಿಗೆ ಮಾಹಿತಿಗಾಗಿ ನೀಡಿದೆ.

ಮಾನ್ಯ ಆಯುಕ್ತರ ಆಪ್ತ ಶಾಖೆಗೆ ಮಾಹಿತಿಗಾಗಿ

ಮಾನ್ಯ ನಿರ್ದೇಶಕರ ಆಪ್ತ ಶಾಖೆಗೆ ಮಾಹಿತಿಗಾಗಿ.

ಆಯುಕ್ತರು
ಜಲಾನಯನ ಅಭಿವೃದ್ಧಿ ಇಲಾಖೆ.
ಬೆಂಗಳೂರು.